ರಾಜ್ಯದ ಹಳ್ಳಿಗಳಲ್ಲಿ ಶಾಲಾ ಕಟ್ಟಡಗಳನ್ನು ಕಟ್ಟುವ ಬಗ್ಗೆ

೫೨೫. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಎಷ್ಟು ಹಳ್ಳಿಗಳಲ್ಲಿ ಶಾಲಾ ಕಟ್ಟಡಗಳಿವೆ. ಎಷ್ಟು ಹಳ್ಳಿಗಳಲ್ಲಿ ಶಾಲಾ ಕಟ್ಟಡಗಳಿಲ್ಲ ಈ ಸಾಲಿನಲ್ಲಿ ಇಲ್ಲದೇ ಇರುವ ಶಾಲಾ ಕಟ್ಟಡಗಳನ್ನು ಕಟ್ಟಿಸಲು ಸರ್ಕಾರದವರು ಆಧ್ಯತೆ ಕೊಡುವರೆ?

ಆ ಮುಂದಿನ ಸಾಲಿನಲ್ಲಿಯಲ್ಲಾದರೂ ಹಳ್ಳಿಗಳಲ್ಲಿ ಶಾಲಾ ಕಟ್ಟಡಗಳನ್ನು ಹಳ್ಳಿ ಹಳ್ಳಿಗಳಿಗೂ ಕಟ್ಟಿಸಿ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ಕೊಡಲು ಸರ್ಕಾರದವರು ಯೋಚಿಸಿದ್ದಾರೆಯೇ ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ೩೨೭೩೫ ಪ್ರಾಥಮಿಕ ಶಾಲಾ ಕಟ್ಟಡಗಳಿರುತ್ತವೆ. ೩೧೦೭ ಪ್ರಾಥಮಿಕ ಶಾಲೆಗಳಿಗೆ ಕಟ್ಟಡಗಳಿರುವುದಿಲ್ಲ. ಆಧ್ಯತೆಯ ಮೇಲೆ ಕಟ್ಟಡ ನಿರ್ಮಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಿದೆ.

ಆ) ಎನ್. ಆರ್. ಇ. ಪಿ. ಮತ್ತು ಆರ್.ಎಲ್.ಇ.ಜಿ.ಪಿ. ಯೋಜನೆಗಳಲ್ಲಿ ಹಂತ ಹಂತವಾಗಿ ಎಲ್ಲಾ ಹಳ್ಳಿಗಳ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ಮುಂಧೋಳ ತಾಲ್ಲೂಕು ಇಂಗಳಗಿ ಸರಕಾರಿ ಪ್ರೌಢಶಾಲೆ ಕಟ್ಟಡದ ಬಗ್ಗೆ

೫೩೨. ಶ್ರೀ ಬಿ. ಜಿ. ಜವಳಿ (ಮುಧೋಳ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೭೩-೭೪ ರಲ್ಲಿ ಮುಧೋಳ ತಾಲ್ಲೂಕಿನ ಇಂಗಳಗಿ ಸರ್ಕಾರಿ ಪ್ರೌಢ ಶಾಲೆಯ ಕಟ್ಟಡದ ದುರಸ್ತಿ ಕೆಲಸ ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಮಂತ್ರಿಗಳು).—

ಅ) ಈ ಕಾಮಗಾರಿಯು ಜಿಲ್ಲಾ ಪರಿಷತ್‌ನ ವ್ಯಾಪ್ತಿಗೆ ಬರುವುದರಿಂದ ಜಿಲ್ಲಾ ಮಟ್ಟದಲ್ಲೇ ಕ್ರಮ ತೆಗೆದುಕೊಳ್ಳಲು ಇಲಾಖೆಗೆ ಸೂಚಿಸಿದೆ.

L. I. Scheme near Badhunoor Mudhol Taluk

534. Sri B. G. Jamkhandi (Mudhol).—Will the Minister for Public Works, Command Area Development and Irrigation be pleased to state ?

(a) When the Iift Irrigation Scheme from Ghataprabha river near Badhudoor in Mudhol Taluk was sanctioned ?

(b) What is the estimate cost of the scheme and when it will be completed ?

Sri H. D. Deve Gowda (Tne Minister for Public Works and Irrigation).—

(a) The scheme is not yet sanctioned.

(b) Approximately Rs. 13.98 lakhs. Will be examined after the scheme is sanctioned.